**NOVEBER 21, 2024**

**AKASHAVANI - DHARWAD**

**REGIONAL NEWS BULLETIN (KANNADA) 07.05 A.M.**

<><><>

**AKASHAVAVANI 21.11.2024**

**Regional News Bulletin**

**Read by: Arati Devashikhamani**

**ಶತಮಾನ ಕಂಡ, ಧಾರವಾಡದ** ಕೆಲಗೇರಿ ಕೆರೆಗೆ ಇಂದು ಬೆಳಗ್ಗೆ ಭೇಟಿ ನೀಡಿದ, ಉಪ ಲೋಕಾಯುಕ್ತ, ನ್ಯಾಯಮೂರ್ತಿ ಕೆ.ಎನ್. ಫಣೀಂದ್ರ ಅವರು, ಇಡೀ ಕೆರೆ ಆವಾರದಲ್ಲಿ ಜಿಲ್ಲಾಡಳಿತದ ಹಿರಿಯ ಅಧಿಕಾರಿಗಳೊಂದಿಗೆ ಸುತ್ತಾಡಿ, ಪರಿಸ್ಥಿತಿ ಅವಲೋಕಿಸಿದರು. ಧಾರವಾಡ ಕೃಷಿ ವಿಶ್ವವಿದ್ಯಾಲಯದ ಅಧಿಕಾರಿಗಳು ಸೇರಿದಂತೆ, ಹುಬ್ಬಳ್ಳಿ–ಧಾರವಾಡ ಮಹಾನಗರ ಪಾಲಿಕೆ ಅಧಿಕಾರಿಗಳಿಗೆ, 20 ದಿನಗಳ ಕಾಲಮಿತಿ ನೀಡಿ, ಕೆರೆಯನ್ನು, ಸುತ್ತಲಿನ ಆವಾರವನ್ನು ಸುಸ್ಥಿತಿಗೆ ತರುವಂತೆ, ನಿರ್ದೇಶಿಸಿದರು. ಕೆರೆಗೆ ಸೇರುವ ಕಲುಷಿತ ನೀರನ್ನು, ಶುದ್ಧೀಕರಿಸಿ ಬಳಿಕ ಕೆರೆಗೆ ಬಿಡಲು, ಆವಾರದಲ್ಲಿ ಶುದ್ಧೀಕರಣ ಘಟಕ ? ಎಸ್.ಟಿ.ಪಿ. ಹಾಗೂ ಸದ್ಯ ದುರಸ್ಥಿಯಲ್ಲಿರುವ ಘಟಕವನ್ನು ಸರಿ ಪಡಿಸಲು ಸೂಚಿಸಿದರು. ನಂತರ ಧಾರವಾಡ ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿ ಸಾರ್ವಜನಿಕರಿಂದ ಕುಂದು ಕೊರತೆಗಳ ದೂರು ಸ್ವೀಕರಿಸಿದರು.

<><><>

**ಸರ್ಕಾರಿ** ನೌಕರರು ಮತ್ತು ಆದಾಯ ತೆರಿಗೆ ಪಾವತಿಸುವವರನ್ನು ಹೊರತುಪಡಿಸಿ ಉಳಿದಂತೆ ಯಾರೊಬ್ಬರ ಪಡಿತರ ಚೀಟಿ ರದ್ದು ಪಡಿಸಬಾರದು ಎಂದು ಆಹಾರ ಇಲಾಖೆ ಅಧಿಕಾರಿಗಳಿಗೆ ಕಟ್ಟುನಿಟ್ಟಿನ ಸೂಚನೆ ನೀಡಿರುವುದಾಗಿ ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದ್ದಾರೆ. ಎಕ್ಸ್ ಮಾಧ್ಯಮದಲ್ಲಿ ಈ ವಿಷಯ ಪ್ರಕಟಿಸಿರುವ ಅವರು, ಸರ್ಕಾರಿ ನೌಕರರು ಮತ್ತು ಆದಾಯ ತೆರಿಗೆ ಪಾವತಿದಾರರನ್ನು ಹೊರತುಪಡಿಸಿದಂತೆ ಉಳಿದ ಯಾವುದೇ ಕುಟುಂಬದವರ ಪಡಿತರ ಚೀಟಿ ರದ್ದಾಗಿದ್ದರೆ ತಕ್ಷಣ ವಾಪಸ್ ನೀಡಬೇಕು. ಬಡ ಕುಟುಂಬದವರ ಪಡಿತರ ಚೀಟಿಗಳನ್ನು ವಿನಾಕಾರಣ ರದ್ದು ಮಾಡಿದರೆ ಆಹಾರ ಇಲಾಖೆ ಅಧಿಕಾರಿಗಳ ವಿರುದ್ಧ ಕ್ರಮ ಜರುಗಿಸಲಾಗುವುದು ಎಂದಿದ್ದಾರೆ.

<><><>

**ಆರೋಗ್ಯ ಇಲಾಖೆಯ** 'ಡಿ' ಗ್ರೂಪ್ ನೌಕರರಿಗೆ ನೇಮಕಾತಿ ವ್ಯವಸ್ಥೆಯಲ್ಲಿ ಬದಲಾವಣೆ ತರಲಾಗುತ್ತಿದ್ದು, ಹೊರಗುತ್ತಿಗೆ ಬದಲು ನೇರ ವೇತನ ಪಾವತಿ ವ್ಯವಸ್ಥೆ ಅಳವಡಿಸಿಕೊಳ್ಳುವ ಬಗ್ಗೆ ಕಾನೂನು ಇಲಾಖೆಯ ಸಲಹೆ ಕೇಳಲಾಗಿದೆ ಎಂದು ಆರೋಗ್ಯ ಖಾತೆ ಸಚಿವ ದಿನೇಶ್‌ಗುಂಡೂರಾವ್ ತಿಳಿಸಿದ್ದಾರೆ. ದಾವಣಗೆರೆಯಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಗುತ್ತಿಗೆ ನೌಕರರಿಗೆ ನೇರ ಪಾವತಿ ವ್ಯವಸ್ಥೆ ಜಾರಿಗೊಳಿಸಿದರೆ ಅನುಕೂಲವಾಗಲಿದೆ. ಕಾನೂನು ಇಲಾಖೆ ಒಪ್ಪಿಗೆ ನೀಡಿದರೆ ರಾಜ್ಯಾದಲ್ಲಿ ಶೀಘ್ರ ಅನುಷ್ಠಾನಕ್ಕೆ ಬರಲಿದೆ' ಎಂದು ಮಾಹಿತಿ ನೀಡಿದರು.

<><><>

**ಪ್ರಧಾನಮಂತ್ರಿ ಆವಾಸ್** ಯೋಜನೆಗೆ ಎಂಟು ವರ್ಷಗಳು ಪೂರ್ಣಗೊಂಡವು. ಪ್ರತಿಯೊಬ್ಬರಿಗೂ, ನೆಮ್ಮದಿಯ ಒಂದು ಸೂರು ಕಲ್ಪಿಸಲು, ಬಡ ಜನರ ಕನಸಿನ ಸೂರಿಗೆ ಕೇಂದ್ರ ಸರ್ಕಾರ ಬೆಂಗಾವಲಾಗಿ ನಿಂತಿದೆ ಎಂದು, ಕೇಂದ್ರ ಸಚಿವ ಪ್ರಲ್ಹಾದ ಜೋಶಿ ತಿಳಿಸಿದ್ದಾರೆ. ಎಕ್ಸ್ ಮಾಧ್ಯಮದಲ್ಲಿ ಈ ವಿಷಯ ಪ್ರಕಟಿಸಿರುವ ಅವರು, ಧಾರವಾಡ ಲೋಕಸಭಾ ಕ್ಷೇತ್ರದ, ಗ್ರಾಮೀಣ ಭಾಗದಲ್ಲಿ, 17 ಸಾವಿರದ 894, ನಗರ ಪ್ರದೇಶದಲ್ಲಿ 7 ಸಾವಿರದ 284 ಮನೆಗಳಿಗೆ ಮಂಜೂರಾತಿ ದೊರೆತಿದೆ ಎಂದು, ಸಚಿವ ಜೋಶಿ ಹೇಳಿದ್ದಾರೆ.

<><><>

**ರಾಜ್ಯದ ತುಮಕೂರು,** ಚಿತ್ರದುರ್ಗ, ಕೋಲಾರ ಮತ್ತು ಚಿಕ್ಕಬಳ್ಳಾಪುರದಲ್ಲಿ ಹೆಚ್ಚಾಗಿ ಹುಣಸೆ ಹಣ್ಣು ಬೆಳೆಯಲಾಗುತ್ತಿದೆ. ಹುಣಿಸೆ ಬೆಳೆಗಾರರಿಗೆ ಉತ್ತಮ ಮಾರುಕಟ್ಟೆ ಹಾಗೂ ಸೂಕ್ತ ಬೆಲೆ ಖಾತ್ರಿ ಪಡಿಸಬೇಕಿದೆ ಎಂದು, ಹೊಸ ದಿಲ್ಲಿಯ, ರಾಜ್ಯ ಸರ್ಕಾರದ ವಿಶೇಷ ಪ್ರತಿನಿಧಿ ಟಿ.ಬಿ. ಜಯಚಂದ್ರ ತಿಳಿಸಿದ್ದಾರೆ. ಬೆಂಗಳೂರಿನಲ್ಲಿ, ಹುಣಸೆಹಣ್ಣು ಉದ್ಯಮಶೀಲರಿಗೆ ಕೊಯ್ಲು, ಸಂರಕ್ಷಣೆ ಹಾಗೂ ಮಾರಾಟ ಕುರಿತ, ಮೂರು ದಿನಗಳ

ತರಬೇತಿ ಕಾರ್ಯಾಗಾರಕ್ಕೆ ಚಾಲನೆ ನೀಡಿ, ಅವರು ಮಾತನಾಡಿದರು. ಬೆಂಗಳೂರಿನಲ್ಲಿ ಐ.ಟಿ./ಬಿ.ಟಿ.ಗೆ ಸಂಬಂಧಿಸಿದ, 10 ಸಾವಿರಕ್ಕೂ ಅಧಿಕ ನವೋದ್ಯಮಗಳಿವೆ. ಹಣ್ಣಿಸೆಹಣ್ಣಿನ ಮೌಲ್ಯವರ್ಧನೆಗಾಗಿ, ಹೊಸ ಸಂಶೋಧನೆಗೆ ಒತ್ತು ನೀಡಿದರೆ, ಬೆಳೆಗಾರರ ಹಿತ ಕಾಯಬಹುದು ಎಂದರು.

<><><>

**ಗದಗ ಜಿಲ್ಲೆಯ ಲಕ್ಕುಂಡಿ** ಗ್ರಾಮವು ಐತಿಹಾಸಿಕ ಪಾರಂಪರಿಕ ಪ್ರದೇಶವಾಗಿದ್ದು, ಲಕ್ಕುಂಡಿ ಗ್ರಾಮದಲ್ಲಿ ಅಧ್ಯಯನ ಕೈಗೊಳ್ಳಲು 10 ತಂಡಗಳನ್ನು ರಚಿಸಲಾಗಿದೆ. ಈ ತಂಡಗಳು ನಾಳೆಯಿಂದ 24 ರ ವರೆಗೆ 3 ದಿನಗಳ ಕಾಲ ಗ್ರಾಮದ ಮನೆ, ಕಟ್ಟೆ, ಒಳಗಟ್ಟಿ ಇತರೆಡೆಗಳಲ್ಲಿರುವ ಪ್ರಾಚ್ಯಾವಶೇಷಗಳನ್ನು ಸಂಗ್ರಹಿಸುವ ಕಾರ್ಯ ಮಾಡಲಿದೆ ಎಂದು ಗದಗ ಜಿಲ್ಲಾಧಿಕಾರಿ ಗೋವಿಂದ ರೆಡ್ಡಿ ತಿಳಿಸಿದ್ದಾರೆ.

ಈ ಕುರಿತು ಪ್ರಕಟಣೆಯ ಮೂಲಕ ಮಾಹಿತಿ ನೀಡಿರುವ ಅವರು, ಪ್ರತಿ ತಂಡಗಳಲ್ಲಿ ಪ್ರತ್ಯೇಕವಾಗಿ ಇತಿಹಾಸ ಉಪನ್ಯಾಸಕರು ಹಾಗೂ ಪ್ರವಾಸಿ ಮಿತ್ರರನ್ನು ನಿಯೋಜಿಸಲಾಗಿದೆ. ಪ್ರಾಚ್ಯಾವಶೇಷಗಳ ಅನ್ವೇಷಣೆ ಅಭಿಯಾನವನ್ನು ತಂಡದವರು ಪರಸ್ಪರ ಸಮನ್ವಯತೆ ಸಾಧಿಸಿ ಸಂಪೂರ್ಣ ಯಶಸ್ವಿಗೊಳಿಸಲು ಸೂಚಿಸಲಾಗಿದೆ ಎಂದು ತಿಳಿಸಿದ್ದಾರೆ.

<><><>

**ಶಿವಮೊಗ್ಗದ ನೆಹರು ಕ್ರೀಡಾಂಗಣದ**ಲ್ಲಿ ನಡೆದ, 14 ವರ್ಷದೊಳಗಿನ ಬಾಲಕ, ಬಾಲಕಿಯರ ರಾಜ್ಯ ಮಟ್ಟದ ಅಥ್ಲೆಟಿಕ್ ಕ್ರೀಡಾಕೂಟದ, ಎತ್ತರ ಜಿಗಿತ ಸ್ಪರ್ಧೆಯಲ್ಲಿ ಪ್ರಥಮ ಮತ್ತು 80 ಮೀಟರ್ಸ್ ಹರ್ಡಲ್ಸ್ನಲ್ಲಿ ದ್ವಿತೀಯ ಸ್ಥಾನ ಗಳಿಸಿದ ಆರೋನ್ ಹಾಗೂ 600 ಮೀಟರ್ ಓಟದ ಸ್ಪರ್ಧೆಯಲ್ಲಿ ಪ್ರಥಮ ಸ್ಥಾನಗಳಿಸಿದ, ಅಪೂರ್ವಾ, ಜಾರ್ಖಂಡ್ ರಾಂಚಿಯಲ್ಲಿ ನಡೆಯುವ, ರಾಷ್ಟ್ರ ಮಟ್ಟದ ಅಥ್ಲೆಟಿಕ್ ಸ್ಪರ್ಧೆಗೆ ಆಯ್ಕೆಯಾಗಿದ್ದಾರೆ. ಕ್ರೀಡಾ ವಸತಿ ನಿಲಯದ ಬಾಳಪ್ಪ ಮಾನೆ ತರಬೇತಿ ನೀಡುತ್ತಿದ್ದಾರೆ.

<><><>

**ಅರ್ಹ ಬಡವರ ಬಿ.ಪಿ.ಎಲ್.** ಪಡಿತರ ಚೀಟಿ ರದ್ದಾಗಿದ್ದರೆ, ಮರು ವಿತರಿಸಲಾಗುವುದು. ಆತಂಕಪಡುವ ಅಗತ್ಯವಿಲ್ಲ ಎಂದು, ಉಪ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ, ಬೆಂಗಳೂರಿನಲ್ಲಿ ಸ್ಪಷ್ಟ ಪಡಿಸಿದ್ದಾರೆ.

<><><>

**ವಿಧಾನ ಮಂಡಲ ಚಳಿಗಾಲದ ಅಧಿ**ವೇಶನ, ಡಿಸೆಂಬರ್ 9 ರಿಂದ ಬೆಳಗಾವಿಯ ಸುವರ್ಣ ಸೌಧದಲ್ಲಿ ನಡೆಯಲಿದ್ದು, ಜಿಲ್ಲಾಧಿಕಾರಿ ಮೊಹಮ್ಮದ್ ರೋಷನ್, ಪೂರ್ವ ಸಿದ್ಧತಾ ಸಭೆ ನಡೆಸಿದರು.

<><><>

**ಸಂಸತ್ತಿನ ಚಳಿಗಾಲದ** ಅಧಿವೇಶನ, ಬರುವ ಸೋಮವಾರ 25 ರಿಂದ, ಡಿಸೆಂಬರ್ 20ರ ವರೆಗೆ ನಡೆಯಲಿದೆ.

<><><>

ಇಲ್ಲಿಗೆ ಪ್ರದೇಶ ಸಮಾಚಾರ ಮುಕ್ತಾಯವಾಯಿತು.

<><><>

ನಮ್ಮ ಮುಂದಿನ ರಾಷ್ಟ್ರೀಯ ವಾರ್ತಾ ಪ್ರಸಾರ 1 ಗಂಟೆ 10 ನಿಮಿಷಕ್ಕೆ.

<><><>